4) 1994-95ರಲ್ಲಿ ಈ ಯೋಜನೆಯನ್ನು ಜಾರಿಗೊಳಿಸಿದ ಜಿಲ್ಲೆಗಳಲ್ಲಿ ಫಲಾನುಭವಿಗಳಿಂದ ಉತ್ತಮ ಪ್ರತಿಕ್ರಿಯೆ ದೊರೆತಿರುತ್ತದೆ. ಈ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಈ ಯೋಜನೆಯಲ್ಲಿ ಅನುಷ್ಠಾನಗೊಳಿಸಿದ ನಂತರ ಫಲಿತಾಂಶವನ್ನು ಗಣನೆಗೆ ತೆಗೆದುಕೊಂಡು ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಕ್ರಮಗಳನ್ನು ರೂಪಿಸಲಾಗುವುದು.

ಚಿಕ್ಕಪೇಟೆ ಕ್ಷೇತ್ರದಲ್ಲಿ ಶಾಲೆಗಳ ದುರಸ್ತಿಯಾಗದೆ ಇರುವುದು.

2195 - ಶ್ರೀ ಪ್ರಕಾಶ್ ಪಿ.ಎಸ್ (ಚಿಕ್ಕಪೇಟೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಪೇಟೆ ಕ್ಷೇತ್ರದ ಸರ್ಕಾರಿ ಶಾಲೆಗಳು ದುರಸ್ತಿಯಾಗದೇ ಹಾಗೂ ಶಿಥಿಲಗೊಂಡಿರುವ ಶಾಲೆಗಳ ಸಂಖ್ಯೆ ಎಷ್ಟು?

ಆ) ಮೇಲ್ಕಂಡ ಶಾಲೆಗಳನ್ನು ಕೂಡಲೇ ಸುವ್ಯವಸ್ಥೆಗೊಳಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) 03

1) ಸರ್ಕಾರಿ ಉರ್ದು ಮಾದರಿ ಪ್ರಾಥಮಿಕ ಶಾಲೆ, ಸುಲ್ತಾನಪೇಟೆ,

2) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ವಿದ್ಯಾ ಗಣಪತಿ) ಅರಳೇಪೇಟೆ.

3) ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ (ಗಣೇಶ) ಸುಲ್ತಾನಪೇಟೆ.

ಆ) ಈ ಶಾಲೆಗಳ ದುರಸ್ತಿ ಕಾರ್ಯಕ್ಕಾಗಿ ಹಣ ಬಿಡುಗಡೆ ಮಾಡಿದ್ದು ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

50ನೇ ವರ್ಷದ ಸ್ವಾತಂತ್ರ ದಿನಾಚರಣೆ

2196 - ಶ್ರೀ ಎನ್. ರಾಜಣ್ಣ (ಭಾರತಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಎ) 50ನೇ ವರ್ಷದ ಸ್ವಾತಂತ್ರ ದಿನಾಚರಣೆ

ಬಿ) 50ನೇ ವರ್ಷದ ಸ್ವಾತಂತ್ರ ದಿನಾಚರಣೆಯನ್ನು ವಿಜೃಂಭಣೆಯಿಂದ ಶಾಲಾ ಕಾಲೇಜುಗಳಲ್ಲಿ ಆಚರಿಸಲು ವಿಶೇಷ ಅನುದಾನ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಿದೆಯೇ?

ಸಿ) ಇಲ್ಲದಿದ್ದಲ್ಲಿ ಸರ್ಕಾರವು ವಿಶೇಷ ಅನುದಾನವನ್ನು ಶಾಲಾ ಕಾಲೇಜುಗಳಿಗೆ ಬಿಡುಗಡೆ ಮಾಡುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುತ್ತದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಎ) ಈ ಕೆಳಕಂಡಂತೆ ಪ್ರಸ್ತಾಪಿಸಲಾಗುತ್ತಿದೆ :

1) 2000 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳಿಗೆ ರೂ.180 ಲಕ್ಷಗಳು.

2) ರೂ. 75,000-00 ಸಾವಿರಗಳು ಶಾಲಾ ಕೊಠಡಿಗಳಿಗೊಂದರಂತೆ 1200 ಶಾಲೆ ಕೊಠಡಿಗಳಿಗೆ ರೂ. 900 ಲಕ್ಷಗಳು.

3) 50 ಸರ್ಕಾರಿ ಪ್ರೌಢಶಾಲೆಗಳು : ಜೂನಿಯರ್ ಕಾಲೇಜುಗಳಿಗೆ ಪ್ರಯೋಗಶಾಲೆ ಹಾಲ್‌ಗಳ ನಿರ್ಮಾಣಕ್ಕಾಗಿ ರೂ. 100 ಲಕ್ಷಗಳು.

4) ಮನೆ, ಮನೆಗಳ ಸರ್ವೆ ಮಾಡಲು ಮತ್ತು ಶಿಕ್ಷಕರಿಗೆ ತರಭೇತಿ ನೀಡುವ ಸಲುವಾಗಿ ರೂ.20 ಲಕ್ಷಗಳು.

ಬಿ) ಇಲ್ಲ

ಸಿ) ಅನ್ವಯಿಸುವುದಿಲ್ಲ.

ಸಂಚಾರಿ ಯುನಾನಿ ಆಸ್ಪತ್ರೆ ಕುರಿತು

2197 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿ ಸಂಚಾರಿ ಯುನಾನಿ ಆಸ್ಪತ್ರೆಯನ್ನು ಸರ್ಕಾರವು ನಡೆಸುತ್ತಿದೆಯೇ?

ಆ) ಹಾಗಿಲ್ಲದಿದ್ದಲ್ಲಿ, ಈ ಬಗ್ಗೆ ಕ್ರಮ ಕೈಗೊಳ್ಳಲು ಸರ್ಕಾರವು ಉದ್ದೇಶಿಸಿದೆಯೇ?

ಡಾ|| ಹೆಚ್.ಸಿ. ಮಹಾದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಪ್ರಸ್ತುತದಲ್ಲಿ ಸಂಚಾರಿ ಯುನಾನಿ ಆಸ್ಪತ್ರೆಗಳನ್ನು ಹೊಂದುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿಲ್ಲ.

ಬೆಂಗಳೂರಿನಲ್ಲಿ ಚಿರತೆ ಹತ್ಯೆ

2199 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೆಂಗಳೂರಿನ ಬಿಇಎಲ್ ಕಾರ್ಖಾನೆ ಬಳಿ ಇತ್ತೀಚೆಗೆ ಚಿರತೆಯನ್ನು ಗುಂಡಿಟ್ಟು ಕೊಂದು ಹಾಕಿರುವುದು ನಿಜವಲ್ಲವೇ?